ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

**DTE-ADMI0ACM2/22/2024**

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:05-06-2024.

**-:: ಸು ತ್ತೋಲೆ ::-**

**ವಿಷಯ:** 2024-25ನೇ ಸಾಲಿನಲ್ಲಿ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ - ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿನ **ಆನ್‌ಲೈನ್ ಆಧಾರಿತ ಕೋರ್ಸುಗಳಲ್ಲಿನ ಭರ್ತಿ ಆಗದೆ ಖಾಲಿ ಉಳಿದಿರುವ ಸೀಟುಗಳನ್ನು ಆಫ್-ಲೈನ್ ಮೂಲಕ ಭರ್ತಿ ಮಾಡಲು ಪ್ರವೇಶ ಅವಧಿಯನ್ನು ವಿಸ್ತರಿಸುವ** ಬಗ್ಗೆ.

**ಉಲ್ಲೇಖ:** ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ಸಂ. **DTE-ADMI0ACM2/22/2024, ದಿ:07-05-2024.**

*********

ಉಲ್ಲೇಖಿತ ಈ ಕಛೇರಿ ಪ್ರವೇಶಾಧಿಸೂಚನೆ ಪತ್ರದಲ್ಲಿ 2024-25ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿನ (ಅನುದಾನಿತ ಕೋರ್ಸುಗಳು) ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳಿಗೆ **ಆನ್-ಲೈನ್** ಮೂಲಕ ಸೀಟು ಹಂಚಿಕೆ ಮಾಡಿ, ನಂತರ ಭರ್ತಿ ಆಗದ ಉಳಿಕೆ ಸೀಟುಗಳಿಗೆ ಪಡೆಯಲು **ದಿನಾಂಕ:06-06-2024** ಕೊನೆಯ ದಿನಾಂಕವಾಗಿ ನಿಗಧಿಪಡಿಸಲಾಗಿತ್ತು.

ಆದರೆ, ಪ್ರವೇಶ ಅವಧಿಯನ್ನು ವಿಸ್ತರಿಸಲು ಪಾಲಿಟೆಕ್ನಿಕ್‌ನ ಪ್ರಾಂಶುಪಾಲರುಗಳು ಕೋರಿರುವುದನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಭರ್ತಿ ಆಗದೆ ಖಾಲಿ ಉಳಿದಿರುವ ಸೀಟುಗಳಿಗೆ **ಅರ್ಹ ವಿದ್ಯಾರ್ಥಿಗಳು ಅರ್ಜಿಯನ್ನು ಸಂಸ್ಥೆಯಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಪ್ರವೇಶ ಬಯಸುವ ಸಂಸ್ಥೆಯ ಪ್ರಾಂಶುಪಾಲರಿಗೆ ಸಲ್ಲಿಸಿ, ಪ್ರವೇಶ ಪಡೆಯಲು ದಿನಾಂಕ:15-06-2024 ರವರೆಗೆ ಪ್ರವೇಶಾವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

ವಿ.ಸೂ:- ಅರ್ಜಿ ಸ್ವೀಕೃತಿಗೆ ನಿಗಧಿಪಡಿಸಿರುವ ಕೊನೆಯ ದಿನಾಂಕಕ್ಕೂ ಮೊದಲೇ ಎಲ್ಲಾ ಸೀಟುಗಳು ಭರ್ತಿಯಾದಲ್ಲಿ ಆ ನಂತರ ಯಾವುದೇ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

ಪ್ರಾಂಶುಪಾಲರು ಕೂಡಲೇ ಈ ಬಗ್ಗೆ ಕ್ರಮ ತೆಗೆದುಕೊಂಡು ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳ (ಅನುದಾನಿತ ಕೋರ್ಸುಗಳಲ್ಲಿ) ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳನ್ನು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. ಪ್ರಯುಕ್ತ, ಇದನ್ನು ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

**"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

ನಿರ್ದೇಶಕರು

**ತಾಂತ್ರಿಕ ಶಿಕ್ಷಣ ಇಲಾಖೆ,**

**ಬೆಂಗಳೂರು.**

**ಗೆ,**

| | |
|---|---|
| **ರಾಜ್ಯದ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ** - | ಸದರಿ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ನಿಯಮಗಳ ಪ್ರಕಾರ ತಮ್ಮ ಹಂತದಲ್ಲಿಯೇ **ದಿ:15-06-2024**ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು. |

**ಪ್ರತಿ ಮಾಹಿತಿಗಾಗಿ:-**

1) ಆಯುಕ್ತರ ಆಪ್ತಶಾಖೆಗೆ.
2) ನಿರ್ದೇಶಕರ ಆಪ್ತಶಾಖೆಗೆ.
3) ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು.
4) ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
5) ಡಿವಿಪಿ(1) ಮತ್ತು ಡಿವಿಪಿ(2) ವಿಭಾಗಕ್ಕೆ.
6) ಇ.ಆರ್.ಎಸ್ ವಿಭಾಗಕ್ಕೆ - ಸಿ.ಬಿ.ಎಸ್.ಇ, ಐ.ಸಿ.ಎಸ್.ಇ ಹಾಗೂ ಕರ್ನಾಟಕೇತರ ಅಭ್ಯರ್ಥಿಗಳಿಗೆ ಅರ್ಹತಾ ಪ್ರಮಾಣ ಪತ್ರ ವಿತರಿಸುವ ಬಗ್ಗೆ ಇ-ಮಾಹಿತಿ ಪುಸ್ತಕದಲ್ಲಿ ತಿಳಿಸಿರುವಂತೆ ಕ್ರಮಜರುಗಿಸತಕ್ಕದ್ದು.
7) ಇ-ಆಡಳಿತ ವಿಭಾಗಕ್ಕೆ - ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
8) ಕಡತಕ್ಕೆ.